## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಪೋಲಿಸ್ ಇಲಾಖೆಯವರು ಸಂಚಾರಿ ಇ-ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ರಿಯಾಯಿತಿ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023, ದಿನಾಂಕ:02.02.2023
2. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023, ದಿನಾಂಕ:03.03.2023
3. ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು, ದಿನಾಂಕ:14.06.2023.
4. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪ್ರಸ್ತಾವನೆ ಸಂಖ್ಯೆ: ಸಾಆ/ಪ್ರವರ್ತನ-3/ ವೈ.ವ.-29/2022-23, ದಿನಾಂಕ: 20.06.2023.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಸರ್ಕಾರದ ಆದೇಶದಲ್ಲಿ, ದಿನಾಂಕ:11.02.2023ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ (onetime measure) ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಸರ್ಕಾರದ ಆದೇಶದಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3) ರ ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:14.06.2023 ರಂದು ನಡೆದ ಸಭೆಯ ನಡವಳಿಗಳಲ್ಲಿ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಪ್ರಕರಣಗಳಿಗೆ ದಂಡದ ಮೊತ್ತಕ್ಕೆ ರಿಯಾಯಿತಿ ನೀಡಲು ಕ್ರಮಕೈಗೊಳ್ಳುವಂತೆ ಕೋರಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4)ರ ಪ್ರಸ್ತಾವನೆಯಲ್ಲಿ, ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರು ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:14.06.2023 ರಂದು ನಡೆದ ಸಭೆಯ ನಿರ್ಣಯದಂತೆ, ದಿನಾಂಕ:11.02.2023ರೊಳಗಿನ ಪ್ರಕರಣಗಳಿಗೆ ಮಾತ್ರ ಅನ್ವಯಿಸುವಂತೆ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ:08.07.2023ರವರೆಗೆ ಕಾಲಾವಕಾಶ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಡಿಓ 2023**
**ಬೆಂಗಳೂರು, ದಿನಾಂಕ:05.07.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023 ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ,

ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ಆದೇಶಿಸಿದೆ.

ಈ ರಿಯಾಯಿತಿಯು ದಿನಾಂಕ:09.09.2023ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 52 ವೆಚ್ಚ-11/2023 (E), ದಿನಾಂಕ:04.07.2023ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Pushpa V.S.
(ಪುಷ್ಪ ವಿ. ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1)/(ಆಡಿಟ್-2), ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5359, ಬೆಂಗಳೂರು–560001.
2. ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಅರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿ.ಟಿ.ಎಂ.ಸಿ. ಸಂಕೀರ್ಣ, 'ಎ' ಬ್ಲಾಕ್, 1ನೇ ಮಹಡಿ, ಶಾಂತಿನಗರ, ಬೆಂಗಳೂರು.

**ಪ್ರತಿ:-**

1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾಕಡತ / ಒ.ಡಿ.ಜಿ.ಸಿ.,